# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಪರಿಶುದ್ಧ ಕಾಣದಿರುವ ಭಾಷೆ
ನಂಜು ತುಂಬಿಕೊಂಡಿರುವ ನಾಲಿಗೆ
ಧರ್ಮವನ್ನು ತಿಳಿಯದಿರುವ ಶಿಕ್ಷಣ
ಶ್ರದ್ಧೇನೆ ಬೇಕಾಗದಿರುವ ಸಾಧನೆ
ಭಯ, ಭಕ್ತಿ ರಹಿತವಾಗಿರೋ ನಡವಳಿಕೆ
ಸಂಸ್ಕೃತಿ ಅರಿಯದಿರುವ ಬೆಳವಣಿಗೆ
ಸಂಸ್ಕಾರ ಕಲಿಸಿಕೊಡದ ಮನೆತನ
ಕಷ್ಟ ಸುಖದಲ್ಲಿ ಭಾಗಿಯಾಗದ ಭಾಂದವ್ಯ
ಮೌಲ್ಯ ಕಳೆದುಕೊಂಡಿರುವ ಜೀವನ
ನಾಡು, ನುಡಿ, ಪ್ರಕೃತಿಯ ಅವನತಿಗೆ ಕಾರಣ..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 19-09-2025 to 25-09-2025 ಬೆಲೆ:10-00 ಸಂಪುಟ–1 ಸಂಚಿಕೆ–1 ಪುಟಗಳು–6














ಬಿಟ್ಟು ಬಿಟ್ಟು ಬರುತ್ತಿರುವ ಮಳೆ ಮತ್ತು ಬಿಸಿಲಿನಿಂದಾಗಿ ಜನ ಸಾಮಾನ್ಯರಲ್ಲಿ ಶೀತ ನೆಗಡಿಯ ಜೊತೆಗೆ ಜ್ವರ ಕಾಣಿಸಿಕೊಳ್ಳುತ್ತಿದ್ದು, ಜ್ವರ ಅತಿಯಾದರೆ ಇಂತಹ ಸಂದರ್ಭದಲ್ಲಿ ವೈದ್ಯರನ್ನು ಸಂಪರ್ಕಿಸುವುದು ಉತ್ತಮ. ಅದರ ಜೊತೆಗೆ ಆದಷ್ಟು ಬಿಸಿ ನೀರು ಮತ್ತು ಬಿಸಿ ಪದಾರ್ಥಗಳನ್ನು ಉಪಯೋಗಿಸುವುದು ಉತ್ತಮ ಎಂದು ವೈದ್ಯರು ಸಲಹೆ ನೀಡುತ್ತಾರೆ.

## ಅಬ್ಬಕ್ಕಳ ಆಡಳಿತ ಚರಿತ್ರೆ ನಿರ್ಮಾಣಕ್ಕೆ ಸ್ಫೂರ್ತಿ –ಪ್ರೊ. ಅಲಗೂರ್



**ಮಂಗಳೂರು:** ಉಳ್ಳಾಲದ ವೀರರಾಣಿ ಅಬ್ಬಕ್ಕಳ ಆಡಳಿತ, ಸಾಮಾಜಿಕ, ಧಾರ್ಮಿಕ ವಿಚಾರ ಚರಿತ್ರೆ ನಿರ್ಮಾಣಕ್ಕೆ ಪೇರಣೆ ಯಾಗಬೇಕು. ಎಂದು ಕಾಸರಗೋಡು ಕೇಂದ್ರೀಯ ವಿಶ್ವವಿದ್ಯಾಲಯ ಉಪ ಕುಲಪತಿ ಡಾ. ಸಿದ್ದು ಪಿ. ಅಲಗೂರ್ ಹೇಳಿದರು. ಕುದ್ಮುಲ್ ರಂಗರಾವ್ ಪುರ ಭವನದಲ್ಲಿ ಮಂಗಳವಾರ ನಡೆದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕರ್ನಾಟಕ ದಕ್ಷಿಣ ಪ್ರಾಂತದ ವತಿಯಿಂದ ರಾಜ್ಯಾದ್ಯಂತ ಸಂಚರಿಸಿದ ರಾಣಿ ಅಬ್ಬಕ್ಕ ರಥಯಾತ್ರೆಯು ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿ, ಶೌರ್ಯದ ಮೂಲಕ ಚಿರಸ್ಥಾಯಿಯಾಗಿರುವ ರಾಣಿ ಅಬ್ಬಕ್ಕಳ **3ನೇ ಪುಟಕ್ಕೆ**

## ಊಹಾ ಪತ್ರಿಕೋದ್ಯಮ ನಿಲ್ಲಿಸಿ: ಸಿಎಂ ಕರೆ



**ಹುಬ್ಬಳ್ಳಿ:** ಮೊದಲು ನೀವೆಲ್ಲಾ ಊಹಾ ಪತ್ರಿಕೋದ್ಯಮವನ್ನು ನಿಲ್ಲಿಸಿ. ಇದು ಸಮಾಜಕ್ಕೆ ಹಾನಿಕರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಲೆಕ್ಟ್ರಾನಿಕ್ ಮೀಡಿಯಾ ಪತ್ರಕರ್ತರಿಗೆ ಕರೆ ನೀಡಿದರು. ಕರ್ನಾಟಕ ಎಲೆಕ್ಟ್ರಾನಿಕ್ ಮೀಡಿಯಾ ಜರ್ನಲಿಸ್ಟ್ ಅಸೋಸಿಯೇಷನ್ ಉದ್ಘಾಟಿಸಿ, ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಅವರು, ನಾನು ರಾಜಕಾರಣಕ್ಕೆ ಬಂದು ಇಷ್ಟು ವರ್ಷದಲ್ಲಿ ಯಾವ ಮಾಧ್ಯಮಗಳಿಗೂ ನನ್ನ ಬಗ್ಗೆ ಹೀಗೇ ಬರೆಯಿರಿ, ಹಾಗೇ ಬರೆಯಿರಿ ಎಂದು ಯಾವತ್ತೂ ಹೇಳಿಲ್ಲ. ನನ್ನ ಬಗ್ಗೆ ಸುಳ್ಳುಗಳನ್ನು ಸತತವಾಗಿ ತೋರಿಸುವಾಗಲೂ ಯಾಕೆ ಹೀಗೆ ತೋರಿಸ್ತೀರಿ ಅಂತಲೂ ಯಾರಿಗೂ ಕೇಳಿಲ್ಲ. ನಿಮ್ಮಿಂದ ನನಗೆ ಏನೇನೂ **3ನೇ ಪುಟಕ್ಕೆ**

## ಜಿಬಿಎ ಏನು ಮಾಡುತ್ತಿದೆ –ಹೆಚ್.ಡಿ.ಕೆ.



ಬೆಂಗಳೂರು: ಜಿಬಿಎ ಏನು ಮಾಡುತ್ತಿದೆ? ಜನರ ತೆರಿಗೆ ದುಡ್ಡು ನುಂಗಿ ಗೊರಕೆ ಹೊಡೆಯುತ್ತಿದೆಯಾ ಎಂದು ಕೇಂದ್ರ ಸಚಿವ ಹೆಚ್. ಡಿ. ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಎಕ್ಸ್‌ಪೋಸ್ಟ್ ಮೂಲಕ ವಾಗ್ದಾಳಿ ನಡೆಸಿರುವ ಅವರು, ನಾಡಪ್ರಭು ಕೆಂಪೇಗೌಡರು ಕಟ್ಟಿದ ಹೆಮ್ಮೆಯ ಬೆಂಗಳೂರು ನಗರದ ಪ್ರತಿಷ್ಠೆಗೆ ಘೋರ ಪೆಟ್ಟು ಬಿದ್ದಿದೆ. ಬೆಂಗಳೂರು ಈಗ ಗುಂಡಿಯೂರು ಆಗಿ ಕುಖ್ಯಾತಿ ಆಗುತ್ತಿರುವುದು ದುರ್ದೈವ. ಮುಖ್ಯ ಮಂತ್ರಿ, ಉಪ ಮುಖ್ಯಮಂತ್ರಿ ಇಬ್ಬರು ಈ ಅಪಮಾನಕ್ಕೆ ಹೊಣೆಗಾರರು. ಬೆಂಗಳೂರು ಮತ್ತು **3ನೇ ಪುಟಕ್ಕೆ**



# ಸುದ್ದಿ ತುಣುಕು

ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಯೋಗ ಗುರುವೋರ್ವನನ್ನು ಆರ್.ಆರ್. ನಗರ ಪೊಲೀಸರು ಬಂಧಿಸಿದ್ದಾರೆ.

ಇಡೀ ಕರ್ನಾಟಕದ ಜನತೆ ನಿಮ್ಮ ಜೊತೆ ಇದ್ದೇವೆ. ನೀವು ಹೋಗುತ್ತೇವೆ ಎನ್ನುವ ಮಾತನ್ನು ಮನಸ್ಸಿನಿಂದ ತೆಗೆದುಬಿಡಿ. ನಾವೆಲ್ಲರೂ ಸೇರಿ ಬೆಂಗಳೂರು ನಗರವನ್ನು ಬದಲಿಸೋಣ ಎಂದು ಹೆಚ್.ಡಿ. ಕುಮಾರಸ್ವಾಮಿ ಅವರು ಕರೆ ನೀಡಿದ್ದಾರೆ.

ಮೈಸೂರು ದಸರಾ ಉದ್ಘಾಟನೆಯ ವಿವಾದ ಕುರಿತು ಸಲ್ಲಿಸಲಾದ ಅರ್ಜಿಯನ್ನು ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಒಪ್ಪಿಕೊಂಡಿದೆ.

ಬಿಡುಗಡೆಯಾಗಲಿರುವ ಜಾಲಿ ಎಲ್‌ಎಲ್‌ಬಿ-3 ಚಿತ್ರದ ಬಿಡುಗಡೆ ಮತ್ತು ಪ್ರದರ್ಶನಕ್ಕೆ ತಡೆ ನೀಡುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ವಜಾಗೊಳಿಸಿರುವ ಹೈಕೋರ್ಟ್, ಅರ್ಜಿದಾರರಿಗೆ 50ಸಾವಿರ ರೂ. ದಂಡ ವಿಧಿಸಿ ಆದೇಶ ಹೊರಡಿಸಿದೆ.

ಸಾಮಾಜಿಕ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಆರ್ಮ್ಸ್ ಆಕ್ಟ್ ಅಡಿ ಪ್ರಕರಣ ದಾಖಲಾಗಿದೆ.

ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಆಯೋಗ ಇದೇ ತಿಂಗಳ 22ರಿಂದ ನಡೆಸಲಿರುವ ಜಾತಿ ಗಣತಿಗೂ ಮುನ್ನವೇ ಲಿಂಗಾಯತ ಸಮುದಾಯವನ್ನು ಪ್ರತಿನಿಧಿಸುವ ಮಠಾಧೀಶರು ಹಾಗೂ ನಾಯಕರ ನಡುವೆ ಭಿನ್ನಾಭಿಪ್ರಾಯಗಳು ಮೂಡಿವೆ.

ಕೆಟ್ಟ ರಸ್ತೆಗಳು ಮತ್ತು ದೀರ್ಘ ಪ್ರಯಾಣವನ್ನು ಉಲ್ಲೇಖಿಸಿ ಬ್ಲ್ಯಾಕ್‌ಬಕ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಜೇಶ್ ತಮ್ಮ ಕಚೇರಿಯನ್ನು ಬೆಳಂದೂರು ಪ್ರದೇಶದ ಹೊರ ವರ್ತುಲ ರಸ್ತೆಯಿಂದ ಸ್ಥಳಾಂತರಿಸುವುದಾಗಿ ಘೋಷಿಸಿದ್ದಾರೆ.

ದಸರಾ ಮಹೋತ್ಸವ ಉದ್ಘಾಟಕರ ವಿಚಾರದಲ್ಲಿ ವಿವಾದ ಉಂಟಾಗಿರುವುದರಿಂದ ಚಾಮುಂಡಿ ಬೆಟ್ಟದಲ್ಲಿ ನಡೆಯಲಿರುವ ದಸರಾ ಉದ್ಘಾಟನೆ ಸಮಾರಂಭದಲ್ಲಿ ಯಾವುದೇ ಪ್ರತಿಭಟನೆ ಮತ್ತು ಗೊಂದಲ ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಸೂಚನೆ ನೀಡಿದರು.

ರೈಲಿನಿಂದ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದ ನೌಕಾನೆಲೆ ಅಧಿಕಾರಿಯನ್ನು ರಕ್ಷಣೆ ಮಾಡಿದ ಕಾರವಾರದ ಯುವಕನನ್ನು ನೌಕಾನೆಲೆ ಅಧಿಕಾರಿಗಳು ಗೌರವಿಸಿ ಸನ್ಮಾನಿಸಿದ್ದಾರೆ.

ನಟ ದರ್ಶನ್ ಅವರಿಗೆ ಜೈಲಿನ ಕೈಪಿಡಿಯಲ್ಲಿರುವ ನಿಯಮಗಳಂತೆ ಸೌಲಭ್ಯ ನೀಡಲು ನ್ಯಾಯಾಲಯದ ಆದೇಶಿಸಿದ್ದರೂ, ಕನಿಷ್ಠ ಸೌಲಭ್ಯ ಒದಗಿಸಿಲ್ಲ ಎಂದು ದರ್ಶನ್ ಪರ ವಕೀಲರು ದೂರಿದ್ದಾರೆ.

ಮೈಸೂರು ದಸರಾ ಉದ್ಘಾಟನೆಗೆ ಲೇಖಕಿ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸುವುದನ್ನು ಖಂಡಿಸುವ ಭರದಲ್ಲಿ ದಲಿತ ಮಹಿಳೆಗೆ ಅವಮಾನ ಮಾಡಿದ್ದ ಆರೋಪದಲ್ಲಿ ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರ ವಿರುದ್ಧ ಬಲವಂತದ ಕ್ರಮಕೈಗೊಳ್ಳದಂತೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಶರಾವತಿ ಕಣಿವೆಯಲ್ಲಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತದಿಂದ ನಿರ್ಮಿಸಲು ಮುಂದಾಗಿರುವ 2000 ಮೆಗಾವ್ಯಾಟ್ ಸಾಮರ್ಥ್ಯದ ಪಂಪ್ಡ್ ಸ್ಟೋರೇಜ್ ಯೋಜನೆಗೆ ಉತ್ತರಕನ್ನಡದಲ್ಲಿ ತೀವ್ರ ವಿರೋಧ ವ್ಯಕ್ತವಾಗತೊಡಗಿದೆ.

ಸಾಮೂಹಿಕ ಅತ್ಯಾಚಾರ ಆರೋಪ ಪ್ರಕರಣದಲ್ಲಿ ವಿಶೇಷ ತನಿಖಾ ತಂಡವು ಬಿ ರಿಪೋರ್ಟ್ ಸಲ್ಲಿಸಿದ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕ ಮುನಿರತ್ನ ಹಾಗೂ ಮತ್ತಿತರರ ವಿರುದ್ಧದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ.

## ಚಿಕನ್ ಸುಕ್ಕ



**ಬೇಕಾಗುವ ಸಾಮಾಗ್ರಿಗಳು :**

1 ಕೆಜಿ ಚಿಕನ್, 2 ಚಮಚ ದನಿಯಾ, 1/2 ಚಮಚ ಮೆಂತೆ, ಚಿಟಿಕೆಯಷ್ಟು ಅರಿಶಿನ ಪುಡಿ, 1 ಚಮಚ ಕರಿಮೆಣಸು, 1 ಚಮಚ ಜೀರಿಗೆ, 1 ಚಮಚ ಗಸೆಗಸೆ, 5 ಬೆಳ್ಳುಳ್ಳಿ ಎಸಳು, ಹುರಿದ ಬ್ಯಾಡಗಿ ಮೆಣಸಿನ ಕಾಯಿ-10, ತುರಿದ ತೆಂಗಿನ ಕಾಯಿ ಒಂದು ಕಪ್, ಸ್ವಲ್ಪ ಕರಿ ಬೇವಿನ ಎಲೆ, ಈರುಳ್ಳಿ 2, ತುಪ್ಪ 2 ಚಮಚ, ಉಪ್ಪು ರುಚಿಗೆ ತಕ್ಕಷ್ಟು.

**ಮಾಡುವ ವಿಧಾನ :**

ಮೊದಲಿಗೆ ಬಾಣಲೆಯಲ್ಲಿ ತುಪ್ಪ ಹಾಕಿ ಬಿಸಿ ಮಾಡಿ ಅದರಲ್ಲಿ ಕರಿಮೆಣಸು, ಮೆಂತೆ, ಕೊತ್ತಂಬರಿ ಬೀಜ, ಗಸೆಗಸೆ, ಜೀರಿಗೆ, ಹಾಕಿ ಹುರಿದು ತಣ್ಣಗಾದ ನಂತರ ಮೆಣಸಿನ ಕಾಯಿ ಮತ್ತು ಅರಿಶಿಣ ಹಾಕಿ ಪುಡಿ ಮಾಡಬೇಕು. ನಂತರ ಈ ಪುಡಿಯನ್ನು ಚಿಕನ್ ಜೊತೆ ಮಿಶ್ರ ಮಾಡಿ ರುಚಿಗೆ ತಕ್ಕ ಉಪ್ಪು ಹಾಕಿ ಕಡಿಮೆ ಉರಿಯಲ್ಲಿ 4 ರಿಂದ 5 ನಿಮಿಷ ಬೇಯಿಸಿ ನಂತರ ತೆಂಗಿನ ಕಾಯಿ ತುರಿ ಹಾಕಿ, ಪಾತ್ರೆಯ ಬಾಯಿ ಮುಚ್ಚಿ ಮತ್ತೆ 4-5 ನಿಮಿಷ ಚಿಕನ್ನನ್ನು ಬೇಯಿಸಬೇಕು. ಈಗ ಬಾಣಲೆಯನ್ನು ಬಿಸಿ ಮಾಡಿ ಅದಕ್ಕೆ ತುಪ್ಪ ಹಾಕಿ ಅದರಲ್ಲಿ ಕರಿಬೇವಿನ ಎಲೆ ಮತ್ತು ಕತ್ತರಿಸಿದ ಈರುಳ್ಳಿ ಹಾಕಿ, ಈರುಳ್ಳಿ ಕಂದು ಬಣ್ಣಕ್ಕೆ ಬರುವವರೆಗೆ ಹುರಿದು ಅದನ್ನು ತಯಾರಾದ ಚಿಕನ್ ಜೊತೆ ಹಾಕಿ ಮಿಶ್ರ ಮಾಡಿದರೆ ರುಚಿಕರವಾದ ಚಿಕನ್ ಸುಕ್ಕ ಸವಿಯಲು ಸಿದ್ಧ

## ಜೋಳ ಬಳಸಲು ಭಾರತಕ್ಕೆ ಬೇಡಿಕೆ ಇಟ್ಟ ಅಮೆರಿಕ




ನವದೆಹಲಿ : ಭಾರತದೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಳ್ಳಲು ಅಮೆರಿಕ ಎರಡು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿರುವುದು ತಿಳಿದುಬಂದಿದೆ. ಇವತ್ತು ಎರಡೂ ದೇಶಗಳ ತಂಡಗಳ ನಡುವೆ ಹೊಸ ಸುತ್ತಿನ ಮಾತುಕತೆ ನಡೆಯುತ್ತಿರುವ ಹೊತ್ತಲ್ಲೇ ಅಮೆರಿಕದ ಪ್ರಮುಖ ಬೇಡಿಕೆಗಳ ಬಗ್ಗೆ ಮಾಧ್ಯಮಗಳಲ್ಲಿ ವರದಿ ಬರುತ್ತಿವೆ. ರಷ್ಯಾದೊಂದಿಗೆ ಭಾರತ ವ್ಯಾಪಾರ ಮೊಟಕುಗೊಳಿಸಬೇಕು ಎಂಬುದು ಒಂದು ಪ್ರಮುಖ ಬೇಡಿಕೆಯಾಗಿದೆ. ಹಾಗೆಯೇ, ಇಥನಾಲ್ ಉತ್ಪಾದನೆಗೆ ಅಮೆರಿಕದಿಂದ ಜೋಳ ಖರೀದಿಸಬೇಕು ಎಂಬುದು ಮತ್ತೊಂದು ಪ್ರಮುಖ ಬೇಡಿಕೆ. ಅಮೆರಿಕ ಮುಂದಿಟ್ಟಿರುವ ಪ್ರಮುಖ ಬೇಡಿಕೆಗಳಲ್ಲಿ ಸೇರಿವೆ.

## ಇಸ್ರೇಲ್ ಹಮಾಸ್ ಯುದ್ಧಕ್ಕೆ ತುಪ್ಪ ಸುರಿದ ಅಮೆರಿಕಾ



ಟೆಲ್ ಅವಿವ್ : ಅಮೆರಿಕಾ ಬೆಂಬಲ ತೀವ್ರಗೊಳಿಸುತ್ತಿದ್ದಂತೆ ಇಸ್ರೇಲ್ ಗಾಜಾದ ಮೇಲೆ ತನ್ನ ದಾಳಿಯನ್ನು ತೀವ್ರಗೊಳಿಸಿದ್ದು, ಇಸ್ರೇಲ್ ದಾಳಿಗೆ ಗಾಜಾದಲ್ಲಿರುವು ಕಟ್ಟಡಗಳು ಹೊತ್ತಿ ಉರಿಯುತ್ತಿರುವ ವೀಡಿಯೋಗಳು ವೈರಲ್ ಆಗಿವೆ. ಹಮಾಸ್‌ನ್ನು ಸಂಪೂರ್ಣ ನಿರ್ಮೂಲನೆ ಮಾಡುವ ಗುರಿ ಹೊಂದಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಹೊಸ ಮಿಲಿಟರಿ ದಾಳಿಗೆ ಅಮೆರಿಕಾ ಸಂಪೂರ್ಣ ಬೆಂಬಲ ನೀಡುವುದಾಗಿ ಅಮೆರಿಕಾ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರುಬಿಯೋ ಭರವಸೆ ನೀಡಿದ ಕೆಲ ಗಂಟೆಗಳಲ್ಲಿ ಇಸ್ರೇಲ್ ಗಾಜಾದ ಮೇಲೆ ವಾಯುದಾಳಿ ನಡೆಸಿದೆ.

## ವಲಸೆ ವಿರೋಧಿ ಖಂಡಿಸಿ ಲಂಡನ್‌ನಲ್ಲಿ ಭಾರಿ ಪ್ರತಿಭಟನೆ



ಲಂಡನ್ : ಬಲಪಂಥೀಯ ನಾಯಕ ಟಾಮಿ ರಾಬಿನ್ಸ್‌ನ ನಡೆಸಿದ ವಲಸೆ ವಿರೋಧಿ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ ಪರಿಣಾಮ ಜನ ಪೊಲೀಸರ ಮೇಲೆಯೇ ಹಲ್ಲೆ ಮಾಡಿದಂತಹ ಘಟನೆ ನಡೆದಿದ್ದು, ಈ ಘಟನೆಯಲ್ಲಿ 25ಕ್ಕೂ ಹೆಚ್ಚು ಪೊಲೀಸರಿಗೆ ಗಾಯಗಳಾಗಿವೆ. ಕೆಲ ಪ್ರತಿಭಟನಾಕಾರರು ಪೊಲೀಸರ ಮೇಲೆಯೇ ಹಲ್ಲೆ ನಡೆಸಿದ್ದು, ಅವರಿಗೆ ತುಳಿದು ಒದ್ದು ಹೊಡೆದು ಹಲ್ಲೆ ಮಾಡಿದ್ದು, ಇದರಿಂದ ಕೆಲ ಪೊಲೀಸರ ಹಲ್ಲು ಉದುರಿದೆ, ಕೆಲ ಮುಖ ಮೂತಿಗೆ ಗಾಯವಾಗಿದ್ದು, ಕೆಲ ಪೊಲೀಸರ ಬೆನ್ನು ಮೂಳೆಗೂ ಗಾಯವಾಗಿದೆ ಎಂದು ವರದಿಯಾಗಿದೆ. ಈ ಪ್ರತಿಭಟನಾ ಸಮಾವೇಶಕ್ಕೆ ನಿರೀಕ್ಷೆಗೂ ಮೀರಿ ಲಕ್ಷಕ್ಕೂ ಅಧಿಕ ಜನ ಸೇರಿದ್ದು, ಪ್ರತಿಭಟನಾಕಾರರನ್ನು ನಿಯಂತ್ರಿಸುವುದಕ್ಕೆ ಪೊಲೀಸರು ಹರಸಾಹಸಪಟ್ಟಿದ್ದಾರೆ.

## ವಿಶ್ವಸಂಸ್ಥೆಯಲ್ಲಿ ಪ್ಯಾಲೆಸ್ತೈನ್ ಪರವಾಗಿ ಮತ ಚಲಾಯಿಸಿದ ಭಾರತ !




ನವದೆಹಲಿ: ಇಸ್ರೇಲ್ ಮತ್ತು ಪ್ಯಾಲೆಸ್ಟೀನಿಯನ್ನರ ನಡುವಿನ ಶಾಂತಿಯುತ ಇತ್ಯರ್ಥ ಮತ್ತು ಎರಡು ಪ್ರದೇಶಗಳ ಪರಿಹಾರದ ಅನುಷ್ಠಾನದ ಕುರಿತು ನ್ಯೂಯಾರ್ಕ್ ಘೋಷಣೆಯನ್ನು ಅನುಮೋದಿಸುವ ಬಗ್ಗೆ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾರತ ನಿರ್ಣಯದ ಪರವಾಗಿ ಮತ ಚಲಾಯಿಸಿದೆ. ಫ್ರಾನ್ಸ್ ಮಂಡಿಸಿದ ಈ ನಿರ್ಣಯವನ್ನು 142 ರಾಷ್ಟ್ರಗಳು ಪರವಾಗಿ ಮತ ಚಲಾಯಿಸುವ ಮೂಲಕ ಅಂಗೀಕರಿಸಲಾಗಿದೆ. ಶುಕ್ರವಾರ ನಡೆದ ಮತದಾನದಲ್ಲಿ, 'ಪ್ಯಾಲೆಸ್ತೈನ್ ಪ್ರಶ್ನೆಯ ಶಾಂತಿಯುತ ಇತ್ಯರ್ಥ ಮತ್ತು ಎರಡು-ರಾಜ್ಯ ಪರಿಹಾರದ ಅನುಷ್ಠಾನದ ಕುರಿತು ನ್ಯೂಯಾರ್ಕ್ ಘೋಷಣೆಯ ಅನುಮೋದನೆ' ಎಂಬ ಶೀರ್ಷಿಕೆಯಡಿ ನಿರ್ಣಯದ ಪರವಾಗಿ ಮತ ಚಲಾಯಿಸಿದ ರಾಷ್ಟ್ರಗಳಲ್ಲಿ ಭಾರತವೂ ಸೇರಿತ್ತು.

## ಸಂಸತ್ ವಿಸರ್ಜಿಸಿ, ಸಂವಿಧಾನಕ್ಕೆ ತಿದ್ದುಪಡಿ : ಜೆನ್-ಝಿ ಬೇಡಿಕೆ




ಕಠ್ಮಂಡು: ಸಂಸತ್ತನ್ನು ವಿಸರ್ಜಿಸಬೇಕು ಹಾಗೂ ದೇಶದ ಪ್ರಜೆಗಳ ಆಶಯಗಳನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತರಬೇಕು ಎಂದು ನೇಪಾಳದಾದ್ಯಂತ ಸರ್ಕಾರ ವಿರೋಧಿ ಪ್ರತಿಭಟನೆಗಳನ್ನು ಸಂಘಟಿಸಿದ್ದ 'ಜೆನ್-ಝಿ' ಗುಂಪು ಗುರುವಾರ ಒತ್ತಾಯಿಸಿದೆ. 'ದೇಶದಲ್ಲಿ ನಿರ್ಮಾಣವಾಗಿರುವ ಬಿಕ್ಕಟ್ಟಿಗೆ ಮಾತುಕತೆ ಹಾಗೂ ಸಹಕಾರ ತತ್ವದಡಿ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ' ಎಂದು ಸಂಘಟನೆ ಹೋರಾಟಗಾರರು ಪ್ರತಿಪಾದಿಸಿದರು. 'ಜೆನ್-ಝಿ'ಯ ಕೆಲ ನಾಯಕರಾದ ಸುದನ್ ಗುರುಂಗ್, ದಿವಾಕರ ದಂಗಲ್, ಅಮಿತ್ ಬನಿಯಾ ಹಾಗೂ ಜುನಾಲ್ ದಂಗಲ್ ಸುದ್ದಿಗೋಷ್ಠಿ ನಡೆಸಿ, ತಮ್ಮ ಬೇಡಿಕೆಗಳನ್ನು ಮಂಡಿಸಿದರು. 'ಸಂವಿಧಾನವನ್ನು ತಿರಸ್ಕರಿಸಬೇಕು ಎಂಬುದು ನಮ್ಮ ಉದ್ದೇಶವಲ್ಲ. ದೇಶದ ಜನರ ಕಳವಳಗಳನ್ನು ಒಳಗೊಳ್ಳುವ ರೀತಿಯಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತರಬೇಕು' ಎಂದು ಹೋರಾಟಗಾರರು ಹೇಳಿದರು.

## ಮಹಿಳಾ ಗ್ರ್ಯಾಂಡ್ ಸ್ವಿಸ್ ಗೆದ್ದ ವೈಶಾಲಿ ರಮೇಶ್‌ಬಾಬು

ನವದೆಹಲಿ: ಫಿಡೆ ಮಹಿಳಾ ಗ್ರ್ಯಾಂಡ್ ಸ್ವಿಸ್ ಟೂರ್ನಿ ಗೆದ್ದ ಗ್ರ್ಯಾಂಡ್ ಮಾಸ್ಟರ್ ವೈಶಾಲಿ ರಮೇಶ್‌ಬಾಬು ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಅವರ ಉತ್ಸಾಹ ಮತ್ತು ಸಮರ್ಪಣೆ ಅನುಕರಣೀಯ ಎಂದು ಹೇಳಿದ್ದಾರೆ. ಭಾರತೀಯ ಗ್ರ್ಯಾಂಡ್‌ಮಾಸ್ಟರ್ ಸತತ ಎರಡನೇ ಬಾರಿಗೆ ಫಿಡೆ ಮಹಿಳಾ ಗ್ರ್ಯಾಂಡ್ ಸ್ವಿಸ್ ಗೆದ್ದು ದಾಖಲೆ ಬರೆದಿದ್ದಾರೆ. ಉಜ್ಬೇಕಿಸ್ತಾನದ ಸಮರ್‌ಖಂಡ್‌ನಲ್ಲಿ ನಡೆದ 11ನೇ ಹಾಗೂ ಅಂತಿಮ ಸುತ್ತಿನಲ್ಲಿ ಚೀನಾದ ಮಾಜಿ ವಿಶ್ವ ಚಾಂಪಿಯನ್ ಝೊಂಗಿ ಟಾನ್ ವಿರುದ್ಧ ನಡೆದ ಸೆಣೆಸಾಟದಲ್ಲಿ ಪಂದ್ಯ ಡ್ರಾಗೊಂಡ ಬಳಿಕ 8 ಅಂಕಗಳೊಂದಿಗೆ ವೈಶಾಲಿ ಚಾಂಪಿಯನ್ ಆದರು.



## ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್ ಮೊದಲ ಚಿನ್ನ ಭಾರತದ ಪಾಲು



ಲಿವರ್‌ಪೂಲ್: ಭಾರತೀಯ ಇತಿಹಾಸದಲ್ಲಿ ಒಂದು ಸುವರ್ಣ ಅಧ್ಯಾಯ ಬರೆಯಲಾಗಿದೆ. ಲಿವರ್‌ಪೂಲ್‌ನಲ್ಲಿ ನಡೆಯುತ್ತಿರುವ ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್-2025 ರಲ್ಲಿ ಮೊದಲ ಚಿನ್ನ ಭಾರತದ ಪಾಲಾಗಿದ್ದು, ಇಲ್ಲಿಯವರೆಗೆ ಮೂವರು ಮಹಿಳಾ ಬಾಕ್ಸರ್‌ಗಳು ಪದಕಗಳನ್ನು ಗೆದ್ದಿದ್ದಾರೆ. ನೂಪುರ್ 80+ ಕೆಜಿ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದರೆ, ಪೂಜಾ ರಾಣಿ 80 ಕೆಜಿ ವಿಭಾಗದಲ್ಲಿ ಕಂಚು ಗೆದ್ದಿದ್ದಾರೆ. ಇದರೊಂದಿಗೆ ಜಾಸ್ಮಿನ್ ಲಂಬೋರಿಯಾ 57 ಕೆಜಿ ವಿಭಾಗದಲ್ಲಿ ಚಿನ್ನದ ಪದಕ ಗೆದ್ದಿದ್ದಾರೆ.

## ನೀರಜ್ ಚೋಪ್ರಾ ಜಾವೆಲಿನ್ ಥ್ರೋನಲ್ಲಿ ಫೈನಲ್‌ಗೆ ಲಗ್ಗೆ

ಟೋಕಿಯೊ: ಹಾಲಿ ಚಾಂಪಿಯನ್, ಭಾರತದ ಚಿನ್ನದ ಹುಡುಗ ಎಂದೇ ಖ್ಯಾತಿ ಪಡೆದಿರುವ ನೀರಜ್ ಚೋಪ್ರಾ ಟೋಕಿಯೊದಲ್ಲಿ ನಡೆದ ವಿಶ್ವ ಚಾಂಪಿಯನ್‌ಶಿಪ್ ಪುರುಷರ ಜಾವೆಲಿನ್ ಥ್ರೋನಲ್ಲಿ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಅವರು ತಮ್ಮ ಮೊದಲ ಎಸೆತದಲ್ಲೆ 84.85ಮೀಟರ್ ಎಸೆದು ಫೈನಲ್‌ಗೆ ನೇರ ಪ್ರವೇಶ ಪಡೆದುಕೊಂಡರು. ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತ ನೀರಜ್, ಅರ್ಹತಾ ಸುತ್ತಿನ ಗ್ರೂಪ್ ಎ ನಲ್ಲಿ ತಮ್ಮ ಮೊದಲ ಈಟಿಯನ್ನು 84.85 ಮೀಟರ್ ದೂರಕ್ಕೆ ಎಸೆದರು.



## ಕರ್ನಾಟಕದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ



ಬೆಂಗಳೂರು: ರಾಜ್ಯದಲ್ಲೂ ಮುಂದಿನ ವರ್ಷ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ನಡೆಯಲಿದೆ. ರಾಜ್ಯ ಮುಖ್ಯ ಚುನಾವಣಾ ಆಯೋಗ ಇದರ ಪೂರ್ವ ಸಿದ್ಧತೆ ಆರಂಭಿಸಿದೆ. ಈ ಕುರಿತಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಮಾಹಿತಿ ನೀಡಿದರು. ರಾಜ್ಯದಲ್ಲಿ 2002ರಲ್ಲಿ ಎಸ್‌ಐಆರ್ ನಡೆಸಲಾಗಿತ್ತು. ಇದೀಗ 23 ವರ್ಷಗಳ ನಂತರ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಗೆ ನಿರ್ಧರಿಸಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಪ್ರತಿ ಮತದಾರರ ಮನೆಗೂ ಹೋಗಿ ಮತದಾರರ ಗುರುತಿನ ಚೀಟಿ ಪರಿಶೀಲಿಸಲಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾ ಆಯೋಗ ತಿಳಿಸಿದೆ.


## ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ಭೂಮಿಗೆ ಪರಿಹಾರ!



ಬೆಂಗಳೂರು: ಕೃಷ್ಣಾ ಮೇಲ್ದಂಡೆ ಯೋಜನೆ-3ಗೆ ಜಮೀನು ಕಳೆದುಕೊಂಡ ರೈತರಿಗೆ ಪರಿಹಾರ ನೀಡುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ನೀರಾವರಿ ಜಮೀನಿಗೆ ಎಕರೆಗೆ 40ಲಕ್ಷ ಹಾಗೂ ಒಣ ಭೂಮಿಗೆ ಎಕರೆಗೆ 30ಲಕ್ಷ ಪರಿಹಾರ ನೀಡಲು ಸಂಪುಟ ಮಹತ್ವದ ತೀರ್ಮಾನ ಕೈಗೊಂಡಿದೆ. ನೀರಾವರಿ ಜಮೀನಿಗೆ ಎಕರೆಗೆ 40ಲಕ್ಷ ಹಾಗೂ ಒಣ ಭೂಮಿಗೆ 30ಲಕ್ಷ ನೀಡಬೇಕು ಎಂಬುದು ರೈತರ ಬೇಡಿಕೆ ಆಗಿದೆ. ಹೀಗಿದ್ದರೂ ಸರ್ಕಾರದ ಪರಿಹಾರ ಮೊತ್ತಕ್ಕೆ ರೈತರು ಸಹಮತ ವ್ಯಕ್ತಪಡಿಸುತ್ತಾರೆ ಎಂದು ಸಿಎಂ ವಿಶ್ವಾಸ ವ್ಯಕ್ತಪಡಿಸಿದರು.

## ಕಲ್ಯಾಣ ಕರ್ನಾಟಕ ಪ್ರತ್ಯೇಕ ಸಚಿವಾಲಯಕ್ಕೆ ಅನುಮೋದನೆ

ಕಲಬುರಗಿ: ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗಾಗಿ ಕೆಲಸಗಳನ್ನು ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಅಭಿವೃದ್ಧಿ ಕಾಮಗಾರಿಗಳ ಮೇಲುಸ್ತುವಾರಿ ಮಾಡಲು ಕಲ್ಯಾಣ ಕರ್ನಾಟಕ ಪ್ರದೇಶ ಸಚಿವಾಲಯ ಸ್ಥಾಪನೆಗೆ ಇಂದು ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಈ ಕುರಿತು ತಮ್ಮ 'ಎಕ್ಸ್' ಖಾತೆಯಲ್ಲಿ ಬರೆದುಕೊಂಡಿರುವ ಅವರು, ಸಚಿವಾಲಯ ಸ್ಥಾಪನೆಯಾಗಿರುವುದರಿಂದ ಮತ್ತಷ್ಟು ಅಭಿವೃದ್ಧಿ ಸಾಧ್ಯವಾಗಲಿದೆ ಎಂದು ಹೇಳಿದ್ದಾರೆ.




## ಆಶಾ ಕಾರ್ಯಕರ್ತೆಯರಿಂದ ಜಾತಿ ಗಣತಿ ಸಮೀಕ್ಷೆಗೆ ಬಹಿಷ್ಕಾರ?




ಬೆಂಗಳೂರು : ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸುತ್ತಿರುವ ಶೈಕ್ಷಣಿಕ ಹಾಗೂ ಸಾಮಾಜಿಕ ಸಮೀಕ್ಷೆ-2025ರಲ್ಲಿ ಭಾಗವಹಿಸದಿರಲು ಆಶಾ ಕಾರ್ಯಕರ್ತೆಯರು ನಿರ್ಧಾರ ಕೈಗೊಂಡಿದ್ದಾರೆ. ಗ್ಯಾರಂಟಿ ಯೋಜನೆ ಸೇರಿದಂತೆ ಈ ಹಿಂದೆ ನಡೆಸಿದ ಸಮೀಕ್ಷೆಗಳ ಹಣವನ್ನು ರಾಜ್ಯ ಸರ್ಕಾರ ಇನ್ನೂ ಪಾವತಿ ಮಾಡಿಲ್ಲ. ಹೀಗಾಗಿ ಸಮೀಕ್ಷೆ ಕಾರ್ಯದಲ್ಲಿ ಭಾಗವಹಿಸದಿರಲು ಆಶಾ ಕಾರ್ಯಕರ್ತೆಯರು ನಿರ್ಧಾರ ಕೈಗೊಂಡಿದ್ದಾರೆಂದು ತಿಳಿದುಬಂದಿದೆ. ಹೀಗಾಗಿ ಸಮೀಕ್ಷೆ ಕಾರ್ಯದಲ್ಲಿ ಭಾಗವಹಿಸದಿರಲು ಆಶಾ ಕಾರ್ಯಕರ್ತೆಯರು ನಿರ್ಧಾರ ಕೈಗೊಂಡಿದ್ದಾರೆಂದು ತಿಳಿದುಬಂದಿದೆ.

## ರೈಲ್ವೆ ಮಾರ್ಗ ನಿರ್ಮಾಣಕ್ಕೆ ಸಂತೋಷ ಲಾಡ್ ಸಹಕರಿಸುತ್ತಿಲ್ಲ : ಸೋಮಣ್ಣ



ಬೆಳಗಾವಿ: 'ಬೆಳಗಾವಿ-ಚನ್ನಮ್ಮನ ಕಿತ್ತೂರು-ಧಾರವಾಡ ನೇರ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಭೂಮಿ ಸ್ವಾಧೀನ ಪಡಿಸಿಕೊಳ್ಳಲು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಸಹಕರಿಸುತ್ತಿಲ್ಲ' ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಆರೋಪಿಸಿದರು. ಯೋಜನೆಗೆ ಬೆಳಗಾವಿ ಜಿಲ್ಲೆಯಲ್ಲಿ 1,200 ಎಕರೆ ಭೂಮಿ ಸ್ವಾಧೀನ ಮಾಡಿಕೊಳ್ಳಲಾಗಿದೆ. ಆದರೆ, ಧಾರವಾಡ ಜಿಲ್ಲೆಯಲ್ಲಿ 45ಎಕರೆ ಭೂಸ್ವಾಧೀನ ಪ್ರಕ್ರಿಯೆ ಆಗಬೇಕಿದೆ. ಲಾಡ್ ಅವರನ್ನು ಮತ್ತೆ ಭೇಟಿಯಾಗಿ ಈ ಬಿಕ್ಕಟ್ಟು ಪರಿಹರಿಸಲು ಎಲ್ಲ ರೀತಿಯ ಪ್ರಯತ್ನ ಮಾಡುತ್ತೇನೆ. ಅವರು ಸಹಕರಿಸದಿದ್ದರೆ ನಮ್ಮ ಬಳಿಯೂ ಪರ್ಯಾಯ ಮಾರ್ಗಗಳಿವೆ' ಎಂದರು.

## ರಾಜ್ಯ ಸರ್ಕಾರಕ್ಕೆ ವಹಿಸಿದ್ದೆ ದೊಡ್ಡ ತಪ್ಪು-ಸಂಸದ ರಾಘವೇಂದ್ರ



ಶಿವಮೊಗ್ಗ : ಶಿವಮೊಗ್ಗ ವಿಮಾನ ನಿಲ್ದಾಣದ ನಿರ್ವಹಣೆಯನ್ನು ರಾಜ್ಯ ಸರ್ಕಾರಕ್ಕೆ ವಹಿಸಿದ್ದೆ ನಾನು ಮಾಡಿದ ದೊಡ್ಡ ತಪ್ಪು ಎಂದು ಸಂಸದ ಬಿ.ವೈ.ರಾಘವೇಂದ್ರ ಬೇಸರ ವ್ಯಕ್ತಪಡಿಸಿದರು. ಶಿವಮೊಗ್ಗದಲ್ಲಿ ವಿಮಾನ ಲ್ಯಾಂಡ್ ಆಗದೆ ಹುಬ್ಬಳಿಗೆ ತೆರಳಿತ್ತು. ಹುಬ್ಬಳ್ಳಿಯಿಂದ ರಸ್ತೆ ಮಾರ್ಗವಾಗಿ ಶಿವಮೊಗ್ಗಕ್ಕೆ ಆಗಮಿಸಿದೆ. ನಮ್ಮೂರಿನಲ್ಲೇ ವಿಮಾನ ನಿಲ್ದಾಣವಿದ್ದರೂ ಇನ್ನೊಂದು ಊರಿಗೆ ಹೋಗಿ ಬರುವಂತಹ ದುಸ್ಥಿತಿ ಇದೆ ಎಂದು ಬೇಸರವಾಗುತ್ತದೆ ಎಂದರು. ನಮ್ಮ ತಂದೆ ಮುಖ್ಯಮಂತ್ರಿ ಆಗಿದ್ದಾಗ ವಿಮಾನ ನಿಲ್ದಾಣದ ನಿರ್ವಹಣೆಯನ್ನು ರಾಜ್ಯ ಸರ್ಕಾರಕ್ಕೆ ವಹಿಸಿಬಿಟ್ಟೆ. ಇದು ನಾನು ಮಾಡಿದ ದೊಡ್ಡ ತಪ್ಪು ಎಂದು ಅನಿಸಲು ಶುರುವಾಗಿದೆ ಎಂದರು.

## ವಕ್ಫ್ ತಿದ್ದುಪಡಿ : ಸುಪ್ರೀಂ ಕೋರ್ಟ್ ಆದೇಶವನ್ನು ಪ್ರಶ್ನಿಸಿದ ಓವೈಸಿ

ಹೈದೆರಾಬಾದ್ : ವಕ್ಫ್ ತಿದ್ದುಪಡಿ ಕಾಯ್ದೆಯ ಕುರಿತು ಸುಪ್ರೀಂ ಕೋರ್ಟ್‌ನ ಮಧ್ಯಂತರ ಆದೇಶವು ಎನ್‌ಡಿಎ ಸರ್ಕಾರ ತಂದ ಕಾನೂನಿನಿಂದ ವಕ್ಫ್ ಆಸ್ತಿಗಳನ್ನು ರಕ್ಷಿಸುವುದಿಲ್ಲ ಎಂದು ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಈ ಕಾಯ್ದೆಯು ಅತಿಕ್ರಮಣದಾರರಿಗೆ ಪ್ರಯೋಜನವನ್ನು ನೀಡುತ್ತದೆ ಮತ್ತು ವಕ್ಫ್ ಭೂಮಿಯ ಅಭಿವೃದ್ಧಿಯನ್ನು ನಿಲ್ಲಿಸಬಹುದು ಎಂದು ಅವರು ಎಚ್ಚರಿಸಿದರು. "ಇದು ಮಧ್ಯಂತರ ಆದೇಶ. ಸುಪ್ರೀಂ ಕೋರ್ಟ್ ಶೀಘ್ರದಲ್ಲೇ ಇಡೀ ಕಾಯ್ದೆಯ ಬಗ್ಗೆ ಅಂತಿಮ ನಿರ್ಧಾರವನ್ನು ನೀಡುತ್ತದೆ ಮತ್ತು ವಿಚಾರಣೆ ಪ್ರಾರಂಭವಾಗುತ್ತದೆ ಎಂದು ನಾವು ಭಾವಿಸುತ್ತೇವೆ.



## ಮತಾಂತರ ವಿರೋಧಿ ಕಾನೂನು : ರಾಜ್ಯಗಳಿಗೆ ಸುಪ್ರೀಂ ನೋಟಿಸ್




ನವದೆಹಲಿ: ಮತಾಂತರ ವಿರೋಧಿ ಕಾನೂನುಗಳನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಕುರಿತು ಸುಪ್ರೀಂ ಕೋರ್ಟ್ ಹಲವಾರು ರಾಜ್ಯಗಳಿಂದ ಪ್ರತಿಕ್ರಿಯೆಗಳನ್ನು ಕೋರಿ ನೋಟಿಸ್ ನೀಡಿದೆ. ವಿವಿಧ ರಾಜ್ಯಗಳಲ್ಲಿ ಜಾರಿಗೆ ತರಲಾದ ಮತಾಂತರ ವಿರೋಧಿ ಕಾನೂನುಗಳನ್ನು ತಡೆಹಿಡಿಯುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸುವುದಾಗಿ ಸುಪ್ರೀಂಕೋರ್ಟ್ ಹೇಳಿದೆ. ಈ ಸಲುವಾಗಿ ಹಲವು ರಾಜ್ಯಗಳಿಗೆ ಪ್ರತಿಕ್ರಿಯೆಯನ್ನು ಕೋರಿ ನೋಟಿಸ್ ನೀಡಿದೆ. ಇದರಲ್ಲಿ ಉತ್ತರ ಪ್ರದೇಶ, ಮಧ್ಯಪ್ರದೇಶ, ಹಿಮಾಚಲ ಪ್ರದೇಶ, ಉತ್ತರಾಖಂಡ, ಛತ್ತೀಸ್‌ಗಢ, ಗುಜರಾತ್, ಹರಿಯಾಣ, ಜಾರ್ಖಂಡ್ ಮತ್ತು ಕರ್ನಾಟಕ ರಾಜ್ಯಗಳು ಸೇರಿವೆ.

## ಡ್ಯಾಂ ಕಟ್ಟುವ ಚೀನಾದ ಯೋಜನೆಗೆ ಸೆಡ್ಡು ಹೊಡೆದ ಭಾರತ



ಇಟಾನಗರ : ಅರುಣಾಚಲ ಪ್ರದೇಶದ ಗಡಿಯಲ್ಲಿ, ಭಾರತಕ್ಕೆ ಆತಂಕಕಾರಿಯಾದ ವಿಶ್ವದ ಅತಿ ದೊಡ್ಡ ಜಲಾಶಯ ಕಟ್ಟಲು ಚೀನಾ ಸಜ್ಜಾಗಿರುವ ಬೆನ್ನಲ್ಲೇ, ಭಾರತವೂ ನೆರೆಯ ದೇಶಕ್ಕೆ ಸಡ್ಡು ಹೊಡೆಯಲು ಮುಂದಾಗಿದೆ. ಚೀನಾದ ಅಣೆಕಟ್ಟಿನಿಂದ ಹಠಾತ್ ನೀರು ಬಿಡುಗಡೆಯಾದರೆ ಪ್ರವಾಹವನ್ನು ತಡೆಗಟ್ಟುವ ಸಾಮರ್ಥ್ಯವುಳ್ಳ17069 ಕೋಟಿ ರು.ವೆಚ್ಚದಲ್ಲಿ ಬೃಹತ್ ಅಣೆಕಟ್ಟು ನಿರ್ಮಿಸಲು ಭಾರತ ಸರ್ಕಾರ ಆಸಕ್ತರಿಂದ ಬಿಡ್ ಕರೆದಿದೆ. ಅರುಣಾಚಲ ಪ್ರದೇಶದ ಗಡಿ ಸಮೀಪ ಬ್ರಹ್ಮಪುತ್ರಾ ನದಿಗೆ ಬೃಹತ್ ಅಣೆಕಟ್ಟು ನಿರ್ಮಾಣಕ್ಕೆ ಇತ್ತೀಚೆಗೆ ಚೀನಾ ಪ್ರಧಾನಿ ಲೀ ಚಿಯಾಂಗ್ ಚಾಲನೆ ನೀಡಿದ್ದರು.


## 1974ರಿಂದ ಪ್ರತಿಭಟನೆಗಳ ಅಧ್ಯಯನಕ್ಕೆ ಅಮಿತ್ ಶಾ ಆದೇಶ




ಹೊಸದಿಲ್ಲಿ: ಭವಿಷ್ಯದಲ್ಲಿ 'ಪಟ್ಟಭದ್ರ ಹಿತಾಸಕ್ತಿಗಳಿಂದ' ಸಾಮೂಹಿಕ ಆಂದೋಲನಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಾಗಿ ಕೇಂದ್ರ ಗೃಹಸಚಿವ ಅಮಿತ್ ಶಾ ಅವರು, ಸ್ವಾತಂತ್ರ್ಯಾನಂತರದ, ವಿಶೇಷವಾಗಿ 1974ರ ನಂತರದ ಎಲ್ಲ ಪ್ರತಿಭಟನೆಗಳ ಅಧ್ಯಯನ ನಡೆಸುವಂತೆ ಪೊಲೀಸ್ ಸಂಶೋಧನೆ ಮತ್ತು ಅಭಿವೃದ್ಧಿ ಘಟಕಕ್ಕೆ ಆದೇಶಿಸಿದ್ದಾರೆ. ಪ್ರತಿಭಟನೆಗಳಿಗೆ ಕಾರಣಗಳು, ಹಣಕಾಸು ನೆರವು, ಅಂತಿಮ ಫಲಿತಾಂಶಗಳು ಮತ್ತು ತೆರೆಮರೆಯಲ್ಲಿನ ರೂವಾರಿಗಳನ್ನು ವಿಶ್ಲೇಷಿಸಲು ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು (ಎಸ್‌ಒಪಿ) ಸಿದ್ಧಪಡಿಸುವಂತೆಯೂ ಅವರು ಸೂಚಿಸಿದ್ದಾರೆ.

## ಸೀಗಡಿ ರಫ್ತು ಆರ್ಡರ್ ರದ್ದಾಗಿ 25000 ಸಾವಿರ ಕೋಟಿ ನಷ್ಟ!

ಆಂಧ್ರ ಪ್ರದೇಶ : ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಅಮೆರಿಕ ವಿಧಿಸಿರುವ ಸುಂಕದಿಂದ ಆಂಧ್ರದ ಸೀಗಡಿ ರಫ್ತಿನ ಮೇಲಾಗುತ್ತಿರುವ ಪರಿಣಾಮದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಅಮೆರಿಕದ ಸುಂಕ ಈ ವಲಯಕ್ಕೆ 25,000 ಕೋಟಿ ರೂ. ನಷ್ಟ ಉಂಟುಮಾಡಿದೆ ಮತ್ತು ಶೇ.50ರಷ್ಟು ರಫ್ತು ಆರ್ಡರ್ ರದ್ದಾಗಲು ಕಾರಣವಾಗಿದೆ ಎಂದು ಹೇಳಿದರು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಮತ್ತು ಮೀನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಅವರಿಗೆ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಪ್ರತ್ಯೇಕ ಪತ್ರ ಬರೆದಿರುವರು.



## ಅತ್ಯಾಧುನಿಕ ಕಣ್ಗಾವಲು ಜಿಯೋ-ಟ್ಯಾಗಿಂಗ್ ಅವಳವಡಿಕೆ



ನವದೆಹಲಿ : ಚೀನಾ ಸ್ನೇಹಪರ ಹಸ್ತ ನೀಡಿ ನಂತರ ಶತ್ರುಗಳಿಗೆ ಮಣಿಯುವ ಅಭ್ಯಾಸ ಹೊಂದಿರುವ ದೇಶ. ಅದಕ್ಕಾಗಿಯೇ ಭಾರತ ಎಷ್ಟೇ ಉತ್ತಮ ಸ್ನೇಹಿತನಾಗಿದ್ದರೂ ಚೀನಾದ ಬಗ್ಗೆ ಎಚ್ಚರಿಕೆಯಿಂದಿದೆ. ಭಾರತವು ಪ್ರಸ್ತುತ ಚೀನಾದೊಂದಿಗಿನ ತನ್ನ ಗಡಿ ಸಮಸ್ಯೆಗಳನ್ನ ತಂತ್ರಜ್ಞಾನದ ಮೂಲಕ ಪರಿಹರಿಸಲು ಪ್ರಯತ್ನಿಸುತ್ತಿರುವಂತೆ ತೋರುತ್ತದೆ. ಭಾರತೀಯ ಪಡೆಗಳು ಗಡಿಗಳಲ್ಲಿ ಗಸ್ತು ತಿರುಗಲು ಅತ್ಯಾಧುನಿಕ ಕಣ್ಗಾವಲು ಉಪಕರಣಗಳನ್ನ ಬಳಸುತ್ತಿವೆ.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಕ್ಯಾಸೆಟ್‌ನಲ್ಲಿ ಹಾಡು ಬಿಡುಗಡೆ ಮಾಡಿದ ಫುಲ್ ಮೀಲ್ಸ್ ತಂಡ

ಒಂದು ಕಾಲದಲ್ಲಿ ಚಿತ್ರದ ಆಡಿಯೊ ಹಿಟ್ ಆಯಿತೊ ಇಲ್ಲವೋ ಎಂದು ನಿರ್ಧಾರವಾಗುತ್ತಿದ್ದದ್ದು ಎಷ್ಟು ಕ್ಯಾಸೆಟ್‌ಗಳು ಮಾರಾಟವಾಯಿತು ಎಂಬುದರ ಆಧಾರದ ಮೇಲೆ. ಅದರೆ ಕಾಲ ಬದಲಾದಂತೆ ಕ್ಯಾಸೆಟ್‌ಗಳನ್ನು ಬಹುತೇಕ ಎಲ್ಲರೂ ಮರೆತು ಹೋಗಿರುವ ಸಂದರ್ಭದಲ್ಲಿ 'ಫುಲ್‌ಮೀಲ್ಸ್' ಚಿತ್ರತಂಡ 'ವಾಹ್ ಏನೋ ಹವಾ' ಹಾಡನ್ನು ಕ್ಯಾಸೆಟ್‌ನಲ್ಲಿ ಬಿಡುಗಡೆ ಮಾಡುವ ಮೂಲಕ ಎಲ್ಲರನ್ನೂ ಹಳೆಯ ನೆನಪುಗಳಿಗೆ ದೂಡುವುದರೊಂದಿಗೆ ತಮ್ಮ ಕ್ರಿಯಾತ್ಮಕ ಪ್ರಯತ್ನದ ಮೂಲಕ ಗಮನ ಸೆಳೆದಿದ್ದಾರೆ. ವಿಜಯನಗರದ ಮಾರುತಿ ಮಂದಿರದಲ್ಲಿ ಆಯೋಜಿಸಲಾಗಿದ್ದ ಫುಲ್ ಮೀಲ್ಸ್ ಹಾಡಿನ ಬಿಡುಗಡೆ ಕಾರ್ಯಕ್ರಮದಲ್ಲಿ ನೆರೆದಿದ್ದ ಎಲ್ಲರಿಗೂ ಆಶ್ಚರ್ಯ ಕಾದಿತ್ತು. ಚಿತ್ರದ ಸಂಗಿತ ನಿರ್ದೇಶಕ ಗುರುಕಿರಣ್, ನಾಯಕ ಲಿಖಿತ್ ಶೆಟ್ಟಿ, ನಿರ್ದೇಶಕ ಎನ್.ವಿನಾಯಕ ನಾಯಕಿಯರಾದ ಖುಷೀರವಿ ಮತ್ತು ತೇಜಸ್ವಿನಿ ಶರ್ಮಾ ಹಾಡಿನ ಕ್ಯಾಸೆಟ್‌ಅನ್ನು ಪ್ರದರ್ಶಿಸಿ ವಿಭಿನ್ನವಾಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಗುರು ಕಿರಣ್ ಟೇಪ್ ರೆಕಾರ್ಡರ್‌ನಲ್ಲಿ ಹಾಡನ್ನು ಹಾಕುವ ಮುಖಾಂತರ ಹಾಡನ್ನು ಲೋಕಾರ್ಪಣೆ ಮಾಡಿ, ನೆರೆದಿದ್ದ ಎಲ್ಲರೂ ಕೆಲಕಾಲ ಹಳೆಯ ನೆನಪುಗಳನ್ನು ಮೆಲಕು ಹಾಕುವಂತೆ ಮಾಡಿದರು. ಬಿಡುಗಡೆಯಾದ 'ವಾಹ್ ಏನೋ ಹವಾ' ಮೆಲೋಡಿ ಪ್ರೇಮ ಗೀತೆ ಎಲ್ಲರ ಗಮನ ಸೆಳೆಯಿತು. ಕವಿರಾಜ್ ಸಾಹಿತ್ಯವಿರುವ ಈ ಹಾಡು ಡಿಜಿಕೆ ಆಡಿಯೋ ಯುಟ್ಯೂಬ್‌ನಲ್ಲಿ ಬಿಡುಗಡೆಯಾಗಿದ್ದು ವೀಕ್ಷಕರ ಮೆಚ್ಚುಗೆಗೆ ಪಾತ್ರವಾಗುತ್ತಿದೆ. ವಿಜೇತ್ ಅರಸ್ ಮತ್ತು ಸುನಿಧಿ ಗಣೇಶ್ ಧ್ವನಿಯಾಗಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಗುರುಕಿರಣ್ ಸಂಗೀತವನ್ನು ಪ್ರಸ್ತುತಪಡಿಸುವ ರೀತಿ ಬದಲಾಗಬಹುದು ಆದರೆ ಸಂಗೀತ ಎಂದಿಗೂ ಬದಲಾಗುವುದಿಲ್ಲ, ಈಗಿನ ಪೀಳಿಗೆಯ ಟ್ರೆಂಡ್‌ಗೆ ತಕ್ಕಂತೆ ಮಾಡಿರುವ ಫುಲ್‌ಮೀಲ್ಸ್‌ನ ಹಾಡುಗಳನ್ನು ಪ್ರೇಕ್ಷಕರು ಮೆಚ್ಚುಕೊಳ್ಳುತ್ತಾರೆ ಎಂದರು. ಫುಲ್ಸ್‌ಮೀಲ್ಸ್ ವೆಡ್ಡಿಂಗ್ ಫೋಟೋ ಗ್ರಾಫರ್ ಸುತ್ತ ಸುತ್ತುವ ಕಥಾ ಹಂದರವನ್ನು ಹೊಂದಿರುವ ರೊಮ್ಯಾಂ ಟಿಕ್ ಕಾಮಿಡಿ ಸಿನೆಮಾ. ಪ್ರೇಕ್ಷಕರು ಸಿನೆಮಾವನ್ನು ಇಷ್ಟಪಡುತ್ತಾರೆ ಎಂಬ ವಿಶ್ವಾಸ ಚಿತ್ರ ತಂಡಕ್ಕಿದೆ.



## 'ಬ್ರ್ಯಾಟ್'(BRAT) 'ಗಂಗಿ ಗಂಗಿ' ಹಾಡು

ಖ್ಯಾತ ನಿರ್ದೇಶಕ ಶಶಾಂಕ್ ನಿರ್ದೇಶನದ, ಜನಪ್ರಿಯ ನಟ ಡಾರ್ಲಿಂಗ್ ಕೃಷ್ಣ ನಾಯಕನಾಗಿ ನಟಿಸಿರುವ ಹಾಗೂ ಮಂಜುನಾಥ್ ಕಂದಕೂರ್ ನಿರ್ಮಾಣದ 'ಬ್ರ್ಯಾಟ್' ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಕನ್ನಡ ಸೇರಿದಂತೆ ಐದು ಭಾಷೆಗಳಲ್ಲಿ ಮೂಡಿಬರುತ್ತಿರುವ ಈ ಚಿತ್ರ ಈಗಾಗಲೇ ಟೀಸರ್ ಹಾಗೂ ಹಾಡಿನ ಮೂಲಕ ಎಲ್ಲರ ಗಮನ ಸೆಳೆದಿದೆ. ಪ್ರಸ್ತುತ ಈ ಚಿತ್ರದ ಮತ್ತೊಂದು ಮನಮೋಹಕ ಹಾಡು 'ಗಂಗಿ ಗಂಗಿ' ಇತ್ತೀಚೆಗೆ ಮಂತ್ರಿ ಮಾಲ್‌ನಲ್ಲಿ ನೆರೆದಿದ್ದ ಸಹಸ್ರಾರು ಅಭಿಮಾನಿಗಳ ಸಮ್ಮುಖದಲ್ಲಿ ಹಾಗೂ ಚಿತ್ರತಂಡದ ಉಪಸ್ಥಿತಿಯಲ್ಲಿ ಅದ್ದೂರಿಯಾಗಿ ಬಿಡುಗಡೆಯಾಯಿತು. ಉತ್ತರ ಕರ್ನಾಟಕದ ಪ್ರತಿಭೆ ಬಾಳು ಬೆಳಗುಂದಿ ಹಾಗೂ ನಾಗರಾಜ್ ಹಾಡಿರುವ ಈ ಹಾಡನ್ನು ಬಾಳು ಬೆಳಗುಂದಿ ಅವರೆ ಬರೆದಿದ್ದಾರೆ. ಅರ್ಜುನ್ ಜನ್ಯ ಸಂಗೀತ ನೀಡಿದ್ದಾರೆ. ಡಾರ್ಲಿಂಗ್ ಕೃಷ್ಣ ಹಾಗೂ ಅನ್ವೈರಾ ಹೆಜ್ಜೆ ಹಾಕಿದ್ದಾರೆ. ಬಾಳು ಬೆಳಗುಂದಿ ಅವರ ಗಾಯನಕ್ಕೆ ಹಾಗೂ ಸಾಹಿತ್ಯಕ್ಕೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಕುರಿಗಾ ಹಿಯಾಗಿದ್ದ ನಾನು, ಅನೇಕ ಜನಪದ ಗೀತೆಗಳನ್ನು ರಚಿಸಿ ಹಾಡುತ್ತಿದ್ದೆ. ಆನಂತರ 'ಸರಿ ಗಮಪ' ಸ್ಪರ್ಧಿಯಾದೆ. ಆ ಕಾರ್ಯಕ್ರಮದಲ್ಲಿ ಅರ್ಜುನ್‌ಜನ್ಯ ನಿನ್ನಿಂದ ನನ್ನ ಸಿನಿಮಾವೊಂದರಲ್ಲಿ ಹಾಡಿಸುತ್ತೇನೆ ಅಂತ ಹೇಳಿದ್ದರು. ಈ ಚಿತ್ರದಲ್ಲಿ ಅವಕಾಶ ನೀಡಿ ದ್ದಾರೆ. ಅವರಿಗೆ, ನಿರ್ಮಾಪಕರಿಗೆ ಹಾಗೂ ನಿರ್ದೇಶಕರಿಗೆ ಈ ಸಂದರ್ಭದಲ್ಲಿ ಧನ್ಯವಾ ದ ತಿಳಿಸುತ್ತೇನೆ ಎಂದರು ಗಾಯಕ ಹಾಗೂ ಗೀತರಚನೆಕಾರ ಬಾಳು ಬೆಳಗುಂದಿ. "ಬ್ರ್ಯಾ ಟ್" ಎಂದರೆ ತರ್ಲೆ ಹುಡುಗ ಹಾಗೂ ದಾರಿ ತಪ್ಪಿದ ಮಗ ಎನ್ನಬಹುದಂತೆ.



## ಪರಿಸರ ಕಾಳಜಿಯ ಕಥೆ ಸೆ.19ರಂದು ತೆರೆಗೆ

ನಾದಬ್ರಹ್ಮ ಹಂಸಲೇಖ ಸಂಗೀತ ನೀಡಿರುವ ಪಿ.ವಿ. ಶಂಕರ್ ನಿರ್ದೇಶನ ಮಾಡಿರುವ 'ಸೋಲ್‌ಮೇಟ್ಸ್' ಸಿನಿಮಾದ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ಬೆಂಗಳೂರಿನ ಉತ್ಸವ್ ಲೆಗಸಿಯಲ್ಲಿ ಅದ್ದೂರಿಯಾಗಿ ನೆರವೇರಿದೆ. ಇದಾಗಲೇ 'ಕಿಲ ಕಿಲ..' ಹಾಗೂ ಇತರೆ ಹಾಡು, ಟೀಸರ್‌ನಿಂದ ಗಮನ ಸೆಳೆದಿರುವ ಚಿತ್ರಕ್ಕೆ 'ಪರಿಸರ ಪ್ರೇಮಿ' ಎಂಬ ಟ್ಯಾಗ್ ಲೈನ್ ಇದೆ. ಜಿ.ಆರ್. ಅರ್ಚನಾ ಹಾಗೂ ಶಂಕರ್ ಪಿ.ವಿ. ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. 'ರಂಗ್ ಬಿ ರಂಗ್' ಖ್ಯಾತಿಯ ಶ್ರೀಜಿತ್ ಸೂರ್ಯ, 'ನಿಮ್ಮ ವಸ್ತುಗಳಿಗೆ ನೀವೇ ಜವಾಬ್ದಾರರು' ಖ್ಯಾತಿಯ ಪ್ರಸನ್ನ ಶೆಟ್ಟಿ, ರಜನಿ, ಯಶ್ವಿಕಾ ನಿಷ್ಕಲ, ಅಲ್ಮಾಸ್, ಯಶ್ ಶೆಟ್ಟಿ, ಅರವಿಂದ್ ರಾವ್, ಶರತ್ ಲೋಹಿತಾಶ್ವ, ಅರುಣಾ ಬಾಲರಾಜ್, ಪ್ರಶಾಂತ್ ನಟನ, ಅರಸು ಮಹಾರಾಜ್, ಗೌತಮ್, ತಾರಕ್, ನವೀನ್ ಡಿ. ಪಡೀಲ್ ಮುಂತಾದವರು ಈ ಸಿನಿಮಾದಲ್ಲಿ ಅಭಿನಯಿಸಿದ್ದಾರೆ. ಈ ಚಿತ್ರ ಇದೇ ವಾರ ಎಂದರೆ ಸೆಪ್ಟೆಂಬರ್ 19ರಂದು ರಾಜ್ಯಾದ್ಯಂತ ತೆರೆಗೆ ಬರುತ್ತಿದೆ. ಕಾರ್ಯಕ್ರಮದಲ್ಲಿ ಮಾತನಾಡಿದ ನಿರ್ದೇಶಕ ಶಂಕರ್"ಈ ಚಿತ್ರ ಪರಿಸರ ಕಾಳಜಿಯ ಸಂದೇಶದೊಡನೆ ರೊಮ್ಯಾನ್ಸ್, ಆಕ್ಷನ್ ಅಂಶಗಳನ್ನು ಒಳಗೊಂಡಿದೆ. ನಾನು ಚಿಕ್ಕವನಿದ್ದಾಗ ಕ್ರಿಕೆಟ್ ಬ್ಯಾಟಿಗಾಗಿ ಒಂದು ಮರ ಕಡಿದಿದ್ದೆ. ಇದಕ್ಕಾಗಿ ನನಗೆ ಪಶ್ಚಾತ್ತಾಪ ಇತ್ತು ಎಂದರು.



## 'ಮರಳಿ ಮನಸಾಗಿದೆ' ಕೊನೆಯ ಹಾಡು ಅನಾವರಣ

ಬೆನಕ ಟಾಕೀಸ್ ಲಾಂಛನದಲ್ಲಿ ಮುದೇಗೌಡ್ರು ನವೀನ್ ಕುಮಾರ್ ಆರ್.ಓ ಹಾಗೂ ತೆಲಿಗಿ ಮಲ್ಲಿಕಾರ್ಜುನಪ್ಪ ಅವರು ಚೊಬ್ಬಲ ಬಾರಿಗೆ ನಿರ್ಮಿಸಿರುವ, ನಾಗರಾಜ್ ಶಂಕರ್ ನಿರ್ದೇಶನದಲ್ಲಿ ಅರ್ಜುನ್ ವೇದಾಂತ್ ನಾಯಕರಾಗಿ ನಟಿಸಿರುವ 'ಮರಳಿ ಮನಸಾಗಿದೆ' ಚಿತ್ರಕ್ಕಾಗಿ ಹೆಸರಾಂತ ಸಾಹಿತಿ ಕೆ.ಕಲ್ಯಾಣ್ ಅವರು ಬರೆದಿರುವ "ಓಡುವ ನದಿಗೆ" ಎಂಬ ಹಾಡನ್ನು ಇತ್ತೀಚೆಗೆ ಕನ್ನಡದ ಜನಪ್ರಿಯ ನಟಿ ಪ್ರೇಮ ಅವರು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದ್ದಾರೆ. ಅನುರಾಧ ಭಟ್ ಅವರು ಈ ಸಮಧುರ ಗೀತೆಯನ್ನು ಹಾಡಿದ್ದು, ವಿನು ಮನಸು ಸಂಗೀತ ನೀಡಿದ್ದಾರೆ. ಇದು ಚಿತ್ರದ ನಾಲ್ಕನೇ ಹಾಗೂ ಕೊನೆಯ ಹಾಡಾಗಿದೆ. ಈವರೆಗೂ ಬಿಡುಗಡೆಯಾಗಿರುವ ಚಿತ್ರದ ಮೂರು ಹಾಡುಗಳು ಕೂಡ ಜನಮನಸೂರೆಗೊಂಡಿದೆ. ಪ್ರಸ್ತುತ A2 ಮ್ಯೂಸಿಕ್‌ನಲ್ಲಿ ಬಿಡುಗಡೆಯಾಗಿರುವ 'ಓಡುವ ನದಿ' ಹಾಡಿಗೂ ಸಹ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಈ ಚಿತ್ರದ 4 ಹಾಡುಗಳು A2 MUSIC ಮೂಲಕ ಬಿಡುಗಡೆಯಾಗಿದೆ. ಯುವ ಜನತೆಗೆ ಹತ್ತಿರವಾದ ಚಿತ್ರದ ಜೊತೆಗೆ ಸಂಬಂಧಗಳ ಮೌಲ್ಯಗಳನ್ನು ತಿಳಿಸುವ ಕಥಾಹಂದರ ಹೊಂದಿರುವ ಈ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದ್ದು, ಪೋಸ್ಟ್ ಪ್ರೊಡಕ್ಷನ್ ವರ್ಕ್ ಅಂತಿಮ ಹಂತದಲ್ಲಿದೆ. ನಿರ್ದೇಶಕ ನಾಗರಾಜ್ ಶಂಕರ್ ಅವರೆ ಚಿತ್ರಕ್ಕೆ ಕಥೆ, ಚಿತ್ರಕಥೆ ಸಂಭಾಷಣೆ ಬರೆದಿದ್ದು, ವಿನು ಮನಸು ಸಂಗೀತ ನೀಡಿದ್ದಾರೆ.



## ಫೋರ್ ವಾಲ್ಸ್ ನಿರ್ದೇಶಕರ ಹೊಸ ಪ್ರಯತ್ನ



ಲಕ್ಷ್ಮೀ ನಿವಾಸ ಧಾರಾವಾಹಿಯ ಸಿದ್ದೇಗೌಡ್ರು ಪಾತ್ರದ ಮೂಲಕ ಮನೆಮಾತಾಗಿರುವ ಬಹುಮುಖ ಪ್ರತಿಮೆ ಧನಂಜಯ್ ಅವರಿಗಿಂದು ಹುಟ್ಟುಹಬ್ಬದ ಸಂಭ್ರಮ. ಡಬ್ಬಿಂಗ್ ಆರ್ಟಿಸ್ಟ್, ಡ್ಯಾನ್ಸರ್ ಆಗಿರುವ ಧನಂಜಯ್ ವಾಸಂತಿ ನಲಿದಾಗ, ಥಗ್ ಆಫ್ ರಾಮಘಡ ಎಂಬ ಚಿತ್ರಗಳ ಮೂಲಕ ಬೆಳ್ಳಿಪರದೆಗೆ ಎಂಟ್ರಿ ಕೊಟ್ಟಿದ್ದರು. ಅವರೀಗ ಪೂರ್ಣ ಪ್ರಮಾಣದ ಹೀರೋ ಆಗಿ ಪರಿಚವಾಗುತ್ತಿದ್ದಾರೆ. ಶುಭಕೃತ್ ನಾಮ ಸಂವತ್ಸರ ಎಂಬ ಸಿನಿಮಾ ಮೂಲಕ ಧನಂಜಯ್ ನಾಯಕನಾಗಿ ಬಣ್ಣ ಹಚ್ಚಿದ್ದಾರೆ. ಅವರ ಹುಟ್ಟುಹಬ್ಬದ ವಿಶೇಷವಾಗಿ ಪೋಸ್ಟರ್ ಬಿಡುಗಡೆ ಮಾಡಿ ಶುಭ ಹಾರೈಸಿದೆ. ಫೋರ್ ವಾಲ್ಸ್ ಚಿತ್ರದ ಮೂಲಕ ಪ್ರೇಕ್ಷಕರ ಮೆಚ್ಚುಗೆ ಪಡೆದಿರುವ ಎಸ್.ಎಸ್. ಸಜ್ಜನ್ ಅವರ ಹೊಸ ಪ್ರಯತ್ನವೇ ಶುಭಕೃತ್ ನಾಮ ಸಂವತ್ಸರ. ಟೈಟಲ್ ಹೇಳುವಂತೆ ಇದೊಂದು ಹಬ್ಬದ ಹಿನ್ನೆಲೆಯಲ್ಲಿ ನಡೆಯುವ ಕಥೆ. ಅದಕ್ಕೆ ಕ್ರೈಮ್ ಥ್ರಿಲ್ಲರ್ ಕಥೆ ಟಚ್ ಕೊಟ್ಟು ಸಜ್ಜನ್ ಸಿನಿಮಾ ಮಾಡುತ್ತಿದ್ದಾರೆ. ಅವರ ಸಾಹಸಕ್ಕೆ ಫೋರ್ ವಾಲ್ಸ್ ನಿರ್ಮಾಣ ತಂಡ ಸಾಥ್ ಕೊಡುತ್ತಿದೆ. ಎಸ್.ವಿ ಪಿಕ್ಚರ್ಸ್ ಬ್ಯಾನರ್‌ನಲ್ಲಿ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಶುಭಕೃತ್ ನಾಮ ಸಂವತ್ಸರ ತೆರೆಗೆ ಬರಲಿದೆ.

## ಅಕ್ಟೋಬರ್ 31ರಂದು 'ಮಾರುತ'ನ ಆಗಮನ

ಖ್ಯಾತ ನಿರ್ದೇಶಕ ಡಾ॥ಎಸ್ ನಾರಾಯಣ್ ನಿರ್ದೇಶನದ, ದುನಿಯಾ ವಿಜಯ್ ಹಾಗೂ ಶ್ರೇಯಸ್ ಮಂಜು ಪ್ರಮುಖಪಾತ್ರದಲ್ಲಿ ನಟಿಸಿರುವ ಮತ್ತು ಕೆ. ಮಂಜು-ರಮೇಶ್ ಯಾದವ್ ಈಶಾ ಪ್ರೊಡಕ್ಷನ್ಸ್ ಲಾಂಛನದಲ್ಲಿ ನಿರ್ಮಿಸಿರುವ 'ಮಾರುತ' ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಬಹು ನಿರೀಕ್ಷಿತ ಈ ಚಿತ್ರ ಅಕ್ಟೋಬರ್ 31ರಂದು ಬಿಡುಗಡೆಯಾಗಲಿದೆ. ಹೆಸರಾಂತ ನಿರ್ಮಾಪಕರಾದ ಕೆ.ಮಂಜು ಹಾಗೂ ರಮೇಶ್ ಯಾದವ್ ನಿರ್ಮಾಣದಲ್ಲಿ, ಸದಭಿರುಚಿ ಚಿತ್ರಗಳ ನಿರ್ದೇಶಕ ಎಸ್ ನಾರಾಯಣ್ ಅವರ ನಿರ್ದೇಶನದಲ್ಲಿ, ತಮ್ಮ ಅಮೋಘ ನಟನೆಯ ಮೂಲಕ ಜನಮನಸೂರೆಗೊಂಡಿರುವ ದುನಿಯಾ ವಿಜಯ್ ಹಾಗೂ ಉತ್ಸಾಹಿ ಯುವನಟ ಶ್ರೇಯಸ್ ಮಂಜು ಅವರ ಸಮಾಗಮದಲ್ಲಿ ಅದ್ದೂರಿಯಾಗಿ ಮೂಡಿ ಬರಲಿದೆ.



## ಹಾಡಿನಲ್ಲಿ ಲವ್ ಯು ಮುದ್ದು.. ಬಿಂದಾಸ್ ಆಗಿ ಕುಣಿದ ಸಿದ್ದು-ರೇಷ್ಮಾ

ಕೆಮಿಸ್ಟ್ರಿ ಆಫ್ ಕರಿಯಪ್ಪ ಸಿನಿಮಾ ಖ್ಯಾತಿಯ ಕುಮಾರ್ ಸಾರಥ್ಯದ ಹೊಸ ಸಿನಿಮಾ ಲವ್ ಯು ಮುದ್ದು ಈಗಾಗಲೇ ಟೈಟಲ್ ಮೂಲಕವೇ ನಿರೀಕ್ಷೆ ಹೆಚ್ಚಿಸಿದೆ. ಇದೀಗ ಈ ಚಿತ್ರದ ಟೈಟಲ್ ಟ್ರ್ಯಾಕ್ ಬಿಡುಗಡೆಯಾಗಿದೆ. ಎಂಟಿ ಆರ್ ಮ್ಯೂಸಿಕ್ ಯೂಟ್ಯೂಬ್‌ನಲ್ಲಿ ಲವ್ ಯು ಮುದ್ದು ಚಿತ್ರದ ಮೆಲೋಡಿ ಗೀತೆ ರಿಲೀಸ್ ಆಗಿದೆ. ಅನಿರುದ್ಧ್ ಶಾಸ್ತ್ರೀ ಸಾಹಿತ್ಯ ಬರೆದು ಸಂಗೀತ ನೀಡಿರುವ ಹಾಡಿಗೆ ಸೋನು ನಿಗಮ್, ಐಶ್ವರ್ಯ ರಂಗರಾಜನ್ ಹಾಗೂ ಸುರಭಿ ಭಾರದ್ವಾಜ್ ಕಂಠ ಕುಣಿಸಿದ್ದಾರೆ. ಲವ್ ಯು ಮುದ್ದು ಅಂತಾ ನಾಯಕ ಸಿದ್ದು ಕುಣಿದಿದ್ದು, ನಾಯಕಿ ರೇಷ್ಮಾ ಹಾಡಿನಲ್ಲಿ ಮಿಂಚಿದ್ದಾರೆ. ಲವ್ ಯು ಮುದ್ದು ಮಹಾರಾಷ್ಟ್ರದಲ್ಲಿ ನಡೆದ ನೈಜ ಪ್ರೇಮ ಕಥಾ ಹಂದರ ಒಳಗೊಂಡಿದೆ. ಕಿರುತೆರೆ ಮತ್ತು ಅಜ್ಞಾತವಾಸಿ ಸಿನಿಮಾ ಖ್ಯಾತಿಯ ಸಿದ್ದು ನಾಯಕನಾಗಿ, ಯುವನಟಿ ರೇಷ್ಮಾ ನಾಯಕಿಯಾಗಿ ನಟಿಸಿದ್ದಾರೆ. ಇನ್ನುಳಿದಂತೆ ರಾಜೇಶ್ ನಟರಂಗ, ತಬಲಾ ನಾಣಿ, ಗಿರೀಶ್ ಶಿವಣ್ಣ, ಶ್ರೀವತ್ಸ ಮತ್ತು ಉಷಾ ಚಿತ್ರದಲ್ಲಿದ್ದಾರೆ. ಕಿಶನ್ ಎಂಟರ್‌ಟೈನ್ಮೆಂಟ್ ಬ್ಯಾನರ್‌ನಡಿ ಕಿಶನ್ ಟಿಎನ್ ಚಿತ್ರ ನಿರ್ಮಾಣ ಮಾಡಿದ್ದಾರೆ.



## 'ಕಲ್ಟ್' 'ಅಯ್ಯೊ ಶಿವನೇ' ಹಾಡಿಗೆ ಫಿದಾ

ನಟ ಝೈದ್ ಖಾನ್ ಅವರು ತಮ್ಮ ಮೊದಲ ಚಿತ್ರ 'ಬನಾರಸ್' ಮೂಲಕವೇ ಎಲ್ಲರ ಗಮನ ಸೆಳೆದಿದ್ದರು. ಪ್ರಸ್ತುತ ಅವರು ನಾಯಕರಾಗಿ ನಟಿಸುತ್ತಿರುವ ಎರಡನೇ ಚಿತ್ರ 'ಕಲ್ಟ್'. 'ಉಪಾಧ್ಯಕ್ಷ' ಸೇರಿದಂತೆ ಯಶಸ್ವಿ ಚಿತ್ರಗಳ ನಿರ್ದೇಶಕ ಅನಿಲ್ ಕುಮಾರ್ ಈ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ. ರಚಿತರಾಮ್ ಹಾಗೂ ಮಲೈಕಾ ಈ ಚಿತ್ರದ ನಾಯಕಿಯರಾಗಿ ನಟಿಸುತ್ತಿದ್ದಾರೆ. ಬಹು ನಿರೀಕ್ಷಿತ ಈ ಚಿತ್ರದ ಮೊದಲ ಹಾಡು 'ಅಯ್ಯೋ ಶಿವನೇ' ಇತ್ತೀಚೆಗೆ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಲಿದೆ. ಅರ್ಜುನ್ ಜನ್ಯ ಅವರ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದಿರುವ ಈ ಹಾಡನ್ನು ಜಸ್ಕರಣ್ ಸಿಂಗ್ ಹಾಗೂ ಪೃಥ್ವಿ ಭಟ್ ಹಾಡಿದ್ದಾರೆ. ಝೈದ್ ಖಾನ್ ಹಾಗೂ ಮಲೈಕ ಈ ಹಾಡಿನಲ್ಲಿ ಅಭಿನಯಿಸಿದ್ದಾರೆ. ಹಾಡು ಬಿಡುಗಡೆಯಾದ ಕ್ಷಣದಿಂದಲೇ ಅಪಾರ ಮೆಚ್ಚುಗೆ ವ್ಯಕ್ತವಾಗುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ನಿರ್ದೇಶಕ ಅನಿಲ್ ಕುಮಾರ್ ಬರೆದಿರುವ 'ಕಲ್ಟ್' ಚಿತ್ರದ ಬಿಡುಗಡೆಗೆ ಕಾಯುತ್ತಿದ್ದಾರೆ.



## 'ಗೆರಿಲ್ಲಾ WAR' ರಿಯಲ್ ಸ್ಟಾರ್ ಉಪೇಂದ್ರ ಓಂಪ್ರಕಾಶ್ ರಾವ್ ಜೋಡಿ

'AK 47', 'ಲಾಕಪ್ ಡೆತ್', 'ಕಲಾಸಿಪಾಳ್ಯ', 'ಹುಚ್ಚ' ಸೇರಿದಂತೆ ಸಾಕಷ್ಟು ಜನಪ್ರಿಯ ಚಿತ್ರಗಳನ್ನು ನಿರ್ದೇಶಿಸಿರುವ ಹಿರಿಯ ನಿರ್ದೇಶಕ ಓಂಪ್ರಕಾಶ್ ರಾವ್ ನಿರ್ದೇಶನದ 50ನೇ ಚಿತ್ರ 'ಗೆರಿಲ್ಲಾ WAR'. ಈ ಚಿತ್ರದ ನಾಯಕರಾಗಿ ಉಪೇಂದ್ರ ಅಭಿನಯಿಸುತ್ತಿದ್ದಾರೆ. ಸೆ.18 ಉಪೇಂದ್ರ ಅವರ ಹುಟ್ಟುಹಬ್ಬ. ಈ ಸಂದರ್ಭದಲ್ಲಿ ವಿಶೇಷ ಪೋಸ್ಟರ್ ಬಿಡುಗಡೆ ಮಾಡಿ "ಗೆರಿಲ್ಲಾ WAR" ಚಿತ್ರ ತಂಡ ಉಪೇಂದ್ರ ಅವರಿಗೆ ಹುಟ್ಟುಹಬ್ಬದ ಶುಭಾಶಯ ತಿಳಿ ಸಿದೆ. ಪ್ರಸ್ತುತ ಓಂಪ್ರಕಾಶ್ ರಾವ್ ನಿರ್ದೇಶನದ ಬಹುನಿರೀಕ್ಷಿತ 'ತ್ರಿಶೂಲಂ' ಚಿತ್ರದಲ್ಲೂ ಉಪೇಂದ್ರ ನಟಿಸಿದ್ದು, 'ಗೆರಿಲ್ಲಾ WAR' ಇವರಿಬ್ಬರ ಕಾಂಬಿನೇಶನ್‌ನಲ್ಲಿ ಮೂಡಿಬರುತ್ತಿರುವ ಎರಡನೇ ಚಿತ್ರವಾಗಿದೆ. ಬೇಬಿ ಇಂಚರ ಅರ್ಪಿಸುವ, ಎನ್ ಎಸ್.ರಾವ್ ಸಿನಿ ಕ್ರಿಯೇಷನ್ಸ್ ಲಾಂಛನದಲ್ಲಿ ಓಂಪ್ರಕಾಶ್ ರಾವ್, ಆರ್. ವಾಸುದೇವ ರೆಡ್ಡಿ ನಿರ್ಮಿಸುತ್ತಿರುವ ಈ ಚಿತ್ರದ ಚಿತ್ರೀಕರಣ ಸದ್ಯದಲ್ಲೇ ಆರಂಭವಾಗಲಿದೆ.



## ಆದಿತ್ಯ ವಿನೋದ್ ಬರೆದ ಕೆಂದಾವರೆ ಪುಸ್ತಕಕ್ಕೆ ಸಿನಿಮಾ ಟಚ್

ಬರಹಗಾರ, ಸಂಗೀತಗಾರ ಹಾಗೂ ನಟ ಆದಿತ್ಯ ವಿನೋದ್ ಬರೆದ ಪುಸ್ತಕವೀಗ ಸಿನಿಮಾ ರೂಪ ತಾಳುತ್ತಿದೆ. ಕಡಲ ತೀರ ಭಾರ್ಗವ ಸಿನಿಮಾ ನಿರ್ದೇಶಿಸಿದ್ದ ಪನ್ನಗ ಸೋಮಶೇಖರ್ ಕಾದಂಬರಿ ಆಧಾರಿತವಾದ ಕೆಂದಾವರೆ ಪುಸ್ತಕಕ್ಕೆ ಸಿನಿಮಾ ಟಚ್ ಕೊಡಲಿದ್ದಾರೆ. ಮಹಿಳಾ ಆಯೋಗದ ಅಧ್ಯಕ್ಷೆಯಿಂದ ಪುಸ್ತಕ ಬಿಡುಗಡೆ ಇತ್ತೀಚೆಗೆ ಕೆಂದಾವರೆ ಪುಸ್ತಕವನ್ನು ಮಹಿಳಾ ಆಯೋಗ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಅನಾವರಣ ಮಾಡಿದರು. ನಿರುತ ಪಬ್ಲಿಕೇಷನ್ ಪುಸ್ತಕ ಪ್ರಕಟಿಸಿದೆ. ಆದಿತ್ಯ ವಿನೋದ್ ಬರೆದ ಈ ಪುಸ್ತಕ ಮಕ್ಕಳ ಕಳ್ಳತನದ ಸುತ್ತ ಸಾಗುವ ಕಥೆಯನ್ನು ಒಳಗೊಂಡಿದೆ. ತಾರಾ ಬಳಗದ ಯಾರೆಲ್ಲಾ ಇದ್ದಾರೆ? ಕೆಂದಾವರೆ ಪುಸ್ತಕದ ಟೈಟಲ್‌ನ್ನೇ ಸಿನಿಮಾಗೆ ಇಡಲಾಗಿದೆ.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ನಂದಿ ಬೆಟ್ಟದಲ್ಲಿ ಎರಡನೇ ಹಂತದಲ್ಲಿ 'ಡ್ಯಾಡ್'



ಕರುನಾಡ ಚಕ್ರವರ್ತಿ ಶಿವರಾಜ್ ಕುಮಾರ್ ಅವರು ನಾಯಕರಾಗಿ ನಟಿಸುತ್ತಿರುವ "ಡ್ಯಾಡ್" ಚಿತ್ರಕ್ಕೆ ಇತ್ತೀಚೆಗಷ್ಟೇ ಮೈಸೂರಿನಲ್ಲಿ ಮೊದಲ ಹಂತದ ಚಿತ್ರೀಕರಣ ಮುಕ್ತಾಯ ವಾಗಿತ್ತು. ಈಗ ಎರಡನೇ ಹಂತದ ಚಿತ್ರೀಕರಣ ನಂದಿ ಬೆಟ್ಟದಲ್ಲಿ ನಡೆಯುತ್ತಿದೆ. ಶಿವರಾಜ್ ಕುಮಾರ್, ಬೇಬಿ ನಕ್ಷತ್ರ ಮುಂತಾದವರು ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. ಹರೀಶ್ ಪೆದ್ದಿ ಅವರು ಮೈರಾ ಕ್ರಿಯೇಷನ್ಸ್ ಲಾಂಛನ ದಡಿ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ತೆಲುಗಿನ ಖ್ಯಾತ ನಿರ್ದೇಶಕ ಅನಿಲ್ ಕನ್ನೆಗಂಟಿ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ನಿರ್ಮಾಪಕರಿಗೆ ಹಾಗೂ, ನಿರ್ದೇಶಕರಿಗೆ ಇದು ಕನ್ನಡದಲ್ಲಿ ಮೊದಲ ಚಿತ್ರ. ಬಿ.ಎಸ್ ಸುಧೀಂದ್ರ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಕನ್ನಡ, ತೆಲುಗು ಮತ್ತು ಮಲಯಾಳಂನಲ್ಲಿ ನಿರ್ಮಾಣವಾಗುತ್ತಿದೆ.

## ಸೆ. 19ರಂದು "ಅರಸಯ್ಯನ ಪ್ರೇಮ ಪ್ರಸಂಗ"



ಮೇಘಶ್ರೀ ರಾಜೇಶ್ ನಿರ್ಮಾಣದ, ಜೆ.ವಿ. ಆರ್ ದೀಪು ನಿರ್ದೇಶನದ ಹಾಗೂ "ಫ್ರೆಂಚ್ ಬಿರಿಯಾನಿ" ಖ್ಯಾತಿಯ ಮಹಾಂತೇಶ್ ಹಿರೇಮಠ ನಾಯಕನಾಗಿ ನಟಿಸಿರುವ ಗ್ರಾಮೀಣ ಸೊಗಡಿನ ಕಾಮಿಡಿ ಕಥಾಹಂದರ ಹೊಂದಿರುವ "ಅರಸಯ್ಯನ ಪ್ರೇಮ ಪ್ರಸಂಗ" ಚಿತ್ರಕ್ಕಾಗಿ ವಿಕ್ರಮ್ ವಸಿಷ್ಠ ಅವರು ಬರೆದಿರುವ, ನಿತಿನ್ ರಾಜರಾಮ್ ಶಾಸ್ತ್ರಿ ಹಾಗೂ "ಜೋಗಿ" ಸುನಿತಾ ಅವರು ಹಾಡಿ ರುವ ಮತ್ತು ಪ್ರವೀಣ್ – ಪ್ರದೀಪ್ ಸಂಗೀತ ನೀಡಿರುವ "ಪೋಸ್ಟ್ ಕಾರ್ಡ್" ಹಾಡು ಬಿಡುಗಡೆ ಹಾಗೂ ಚಿತ್ರದ ಪ್ರೀ ರಿಲೀಸ್ ಇವೆಂಟ್ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಚಂದನ್ ಶೆಟ್ಟಿ ಹಾಗೂ ಆರ್ ಚಂದ್ರು ಅವರು ಹಾಡನ್ನು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಹಲವಾರು ಗಣ್ಯರು ಸಮಾರಂಭಕ್ಕೆ ಆಗಮಿಸಿ ಚಿತ್ರಕ್ಕೆ ಶುಭ ಕೋರಿದರು.

## "ವಿಶ್ವನೇತಾ" ಆಗಲಿದ್ದಾರೆ ಉನ್ನಿ ಮುಕುಂದನ್



ಇಂದು ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನ. ಅವರ ಹುಟ್ಟು ಹಬ್ಬದ ಅಂಗವಾಗಿ ಸಿಲ್ವರ್ ಕ್ಯಾಸ್ಟ್ ಕ್ರಿಯೇಷನ್ಸ್ ಎಂಬ ನಿರ್ಮಾಣ ಸಂಸ್ಥೆ ಮಾ ವಂದೇ ಚಿತ್ರ ಘೋಷಣೆ ಮಾಡಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ಜೀವನ ಆಧಾರಿತ ಸಿನಿಮಾವಾಗಿದೆ. ವೀರ್ ರೆಡ್ಡಿ ಎಂ. ನಿರ್ಮಿಸಿರುವ ಈ ಚಿತ್ರದಲ್ಲಿ ಮಲಯಾಳಂ ನಟ ಉನ್ನಿ ಮುಕುಂದನ್ ನರೇಂದ್ರ ಮೋದಿ ಯವರ ಪಾತ್ರದಲ್ಲಿ ನಟಿಸಲಿದ್ದಾರೆ. ಕ್ರಾಂತಿ ಕುಮಾರ್ ಸಿ.ಎಚ್. ನಿರ್ದೇಶಿಸಲಿರುವ ಮಾ ವಂದೇ ಸಿನಿಮಾ ಎಲ್ಲಾ ವರ್ಗಗಳ ಪ್ರೇಕ್ಷಕ ರನ್ನು ಗುರಿಯಾಗಿ ಇಟ್ಟುಕೊಂಡು ರಚಿಸ ಲಾಗಿದೆಯಂತೆ. ಸಮಾಜದ ಕನಸುಗಳನ್ನು ಹೊಂದಿರುವ ಚಿಕ್ಕ ಹುಡುಗನಿಂದ ಭಾರತದ ಪ್ರಧಾನಿಯಾಗುವವರೆಗಿನ ಮೋದಿಯವರ ಪ್ರಯಾಣವನ್ನು ಚಿತ್ರದಲ್ಲಿ ಕಟ್ಟಿಕೊಡಲಾಗಿದೆ ಯಂತೆ. ಅವರ ವೈಯಕ್ತಿಕ, ರಾಜಕೀಯ ವಿಷಯಗಳು ಇರಲಿದೆಯಂತೆ.

## ಖಾಲಿ ಡಬ್ಬ.. ಇದೇ ವಾರ ತೆರೆಗೆ ಎಂಟ್ರಿ



ಹೊಸಬರ ಪ್ರಯತ್ನದ ಖಾಲಿ ಡಬ್ಬ ಸಿನಿಮಾ ಇದೇ ಶುಕ್ರವಾರ ತೆರೆಗೆ ಬರ್ತಿದೆ. ಈ ಕುರಿತ ಸುದ್ದಿಗೋಷ್ಠಿಯನ್ನು ಬೆಂಗಳೂರಿನ ಎಸ್ ಆರ್ ವಿ ಥಿಯೇಟರ್ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಸಿನಿಮಾ ಬಿಡುಗಡೆ ಬಗ್ಗೆ ನಿರ್ದೇಶಕ ಪ್ರಕಾಶ್ ಕೆ ಅಂಬೈ ಮಾತನಾಡಿ, ಪಾತ್ರದೊಳಗಿನ ಪಾತ್ರಧಾರಿ ಅಂದರೆ ಅದು ಖಾಲಿ ಡಬ್ಬ. ಖಾಲಿ ಡಬ್ಬದಲ್ಲಿ ಒಂದಷ್ಟು ವಿಶೇಷ ಇರುತ್ತದೆ. ಅದನ್ನು ಚಿತ್ರದಲ್ಲಿ ಕಟ್ಟಿ ಕೊಡಲಾಗಿದೆ. ಈ ಸಿನಿಮಾ ರಿಲೀಸ್‌ವರೆಗೂ ಬರಲು ಕಾರಣ ನಿರ್ಮಾಪಕ ಮಂಜು ಗುರಪ್ಪ. ಅವರ ಸಪೋರ್ಟ್ ನಮಗೆ ಸಿಕ್ಕಿದೆ. ಸಾಹಿತ್ಯ, ಸಂಗೀತವನ್ನು ವಿ ನಾಗೇಂದ್ರ ಪ್ರಸಾದ್ ಬರೆದಿದ್ದಾರೆ. ನಾಯಕ ರಾಮ್ ಗುಡಿ ಅದ್ಭುತವಾಗಿ ಅಭಿನಯಿಸಿದ್ದಾರೆ. ಇಲ್ಲಿ ತುಂಬಾ ವಿಷಯಗಳನ್ನು ಹೇಳಲಾಗಿದೆ. ಹೊಸಬರ ಸಿನಿಮಾ ರಿಲೀಸ್ ಮಾಡುವುದೇ ದೊಡ್ಡ ಚಾಲೆಂಜ್. ಅದಕ್ಕೆ ನಿಮ್ಮೆಲ್ಲರ ಸಪೋರ್ಟ್ ಇರಲಿ. ಎಂದರು.







KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021